## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಡಾ. ಬಸವರಾಜ್ ಎಲ್ ಲಕ್ಕಣ್ಣವರ, ಪ್ರಾಧ್ಯಾಪಕರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಕುಲಸಚಿವರ ಹುದ್ದೆಗೆ ನೇಮಿಸುವ ಕುರಿತು.

**ಓದಲಾಗಿದೆ.**

1. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಇವರ ಟಿಪ್ಪಣಿ ಸಂಖ್ಯೆ:ಗ್ರಾಪಂಸ/100/2019-20, ದಿನಾಂಕ:23-09-2019.
2. ಉನ್ನತ ಶಿಕ್ಷಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಇಡಿ 27 ಎಂವಿವಿ 2019, ದಿನಾಂಕ: 30-01-2020.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ರಡಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯವನ್ನು ಗದಗ ಇಲ್ಲಿ ಸ್ಥಾಪಿಸಲಾಗಿದೆ. ಮೇಲೆ ಓದಲಾದ(1) ಟಿಪ್ಪಣಿಯನ್ವಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿಗೆ ಡಾ. ಬಸವರಾಜ್ ಎಲ್ ಲಕ್ಕಣ್ಣವರ, ಮುಖ್ಯಸ್ಥರು ಹಾಗೂ ಡೀನ್ ಶಿಕ್ಷಣ ಅಧ್ಯಯನ ವಿಭಾಗ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರನ್ನು ಕುಲಸಚಿವರನ್ನಾಗಿ ನೇಮಕ ಮಾಡುವಂತೆ ನಿರ್ದೇಶಿಸಿರುತ್ತಾರೆ.

ಮೇಲೆ ಓದಲಾದ(2) ಅನಧಿಕೃತ ಟಿಪ್ಪಣಿಯನ್ವಯ ಡಾ. ಬಸವರಾಜ್ ಎಲ್ ಲಕ್ಕಣ್ಣವರ, ಪ್ರಾಧ್ಯಾಪಕರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಕುಲಸಚಿವರನ್ನಾಗಿ ನೇಮಿಸಲು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ನಿರಾಕ್ಷೇಪಣೆಯ ಆಧಾರದ ಮೇಲೆ ಉನ್ನತ ಶಿಕ್ಷಣ ಇಲಾಖೆಯು ಸಹಮತಿಯನ್ನು ನೀಡಿರುತ್ತದೆ. ಆದುದರಿಂದ, ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 249 ಜಿಪಸ 2016(1), ದಿನಾಂಕ:12-06-2020

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ರ ಪ್ರಕರಣ 18(2)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಡಾ. ಬಸವರಾಜ್ ಎಲ್ ಲಕ್ಕಣ್ಣವರ, ಪ್ರಾಧ್ಯಾಪಕರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ನಿಯೋಜನೆ ಮೇರೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿಯ ಕುಲಸಚಿವರನ್ನಾಗಿ ನೇಮಿಸಿ ಆದೇಶಿಸಿದೆ.

ಡಾ. ಬಸವರಾಜ್ ಎಲ್ ಲಕ್ಕಣ್ಣವರ, ಪ್ರಾಧ್ಯಾಪಕರು ಈ ಹಿಂದೆ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಪಡೆಯುತ್ತಿರುವ ಯು.ಜಿ.ಸಿ. ವೇತನ ಹಾಗೂ ಇನ್ನಿತರೆ ಎಲ್ಲಾ ಸೌಲಭ್ಯಗಳನ್ನು ಕುಲಸಚಿವರ ಅವಧಿಯಲ್ಲಿ ಪಡೆಯಲು ಅರ್ಹರಾಗಿರುತ್ತಾರೆ.

ಈ ಆದೇಶವನ್ನು ಕಡತ ಸಂಖ್ಯೆ:ಗ್ರಾಅಪ 249 ಜಿಪಸ 2016(ಭಾಗ-1)ರ ಟಿಪ್ಪಣಿ ಕಂಡಿಕೆ(42)ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
12/06/2020
(ಸಿ.ಮಂಜೂರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
12/6/2020

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
6. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಶ್ರೀ ಸುರೇಶ್ ವಿ ನಾಡಗೌಡರ್, ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ- ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಕುಲಸಚಿವರ ಹುದ್ದೆಯಿಂದ ತಮ್ಮನ್ನು ಬಿಡುಗಡೆಗೊಳಿಸಿದ್ದು, ಮಾತೃ ಇಲಾಖೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವಂತೆ ಸೂಚಿಸಿದೆ.
9. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.